# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:16ನೇ ಡಿಸೆಂಬರ್, 2025**

**(ಸಮಯ: ಬೆಳಗ್ಗೆ 10.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರು ಮತ್ತು ಏಳನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಡಿ.ಎಸ್. ಅರುಣ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 07(148) | ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರು ಮತ್ತು ಏಳನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಗಮನ ಸೆಳೆಯುವ ಸೂಚನೆಗಳು

01. **ಡಾ: ಎಂ.ಜಿ. ಮುಳೆ** ಅವರು ಬಸವಕಲ್ಯಾಣದಲ್ಲಿರುವ ಐತಿಹಾಸಿಕ ಸ್ಮಾರಕಗಳ ನಿರ್ವಹಣೆ ಮತ್ತು ಉದ್ಯಾನವನಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ಮಂಜುನಾಥ್ ಭಂಡಾರಿ** ಅವರು ಉಡುಪಿ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ವಾರಾಹಿ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಬಸನಗೌಡ ಬಾದರ್ಲಿ** ಅವರು ಹಗರಿಬೊಮ್ಮನಹಳ್ಳಿ ಮೂಲದ ವ್ಯಕ್ತಿಯೊಬ್ಬರು ಸಿಂಧನೂರು ತಾಲ್ಲೂಕಿನಲ್ಲಿ ಇಸ್ಪೀಟ್ ಗ್ಯಾಂಬ್ಲಿಂಗ್ ನಡೆಸುತ್ತಿರುವುದು ಹಾಗೂ ರಾಯಚೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಡ್ರಗ್ಸ್ ಮಾಫಿಯಾ ಚಟುವಟಿಕೆಗಳಿಂದಾಗಿ ಯುವ ಜನತೆಯ ಮೇಲೆ ದುಷ್ಪರಿಣಾಮ ಬೀರುವ ಮೂಲಕ ಸಮಾಜದ ಸ್ವಾಸ್ಥ್ಯ ಹದಗೆಡುತ್ತಿರುವ ನಿಟ್ಟಿನಲ್ಲಿ ಇಂತಹ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

..2..

04. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ವಿಭಾಗದ ಪೊಲೀಸ್ ಠಾಣೆಯಲ್ಲಿ ಸಿಬ್ಬಂದಿಗಳ ಕೊರತೆಯಿದ್ದು, ಪೊಲೀಸ್ ಇಲಾಖೆಯ ನಿಯಮಾವಳಿ ಎಸ್.ಓ.898 ರಂತೆ ಸಿಬ್ಬಂದಿಗಳನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

05. **ಶ್ರೀಮತಿ ಭಾರತಿ ಶೆಟ್ಟಿ** ಅವರು ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಮಂಡಳಿಯ ವತಿಯಿಂದ ನೀಡುತ್ತಿರುವ ತರಬೇತಿಯ ಪಠ್ಯದಲ್ಲಿ ಟೈಲರಿಂಗ್ ಮತ್ತು ಪ್ಲಂಬಿಂಗ್‌ನ್ನು ಸೇರಿಸದೆ ಇರುವುದರಿಂದ ನಿರುದ್ಯೋಗಿಗಳಿಗೆ ತೊಂದರೆಯಾಗುತ್ತಿರುವುದು ಹಾಗೂ ಮಂಡಳಿಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

06. **ಡಾ: ಯತೀಂದ್ರ ಎಸ್.** ಅವರು ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ ಸಮುದಾಯಗಳಿಗೆ ರೂ.1.00 ಕೋಟಿಯವರೆಗೆ ಮೀಸಲಾತಿಯನ್ನು ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗಿದ್ದು, ಫಲಾನುಭವಿಗಳಿಗೆ ಪ್ರತ್ಯೇಕ ಜಾತಿ ಪ್ರಮಾಣಪತ್ರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

07. **ಶ್ರೀ ಶಿವಕುಮಾರ್ ಕೆ.** ಅವರು ರಾಜ್ಯದಲ್ಲಿ ಹಲವು ದಶಕಗಳಿಂದ ಖಾಸಗಿ ಭೂಮಾಪಕರು ಅಧಿಕೃತವಾಗಿ ಭೂದಾಖಲೆಗಳ ಹಾಗೂ ಭೂಮಾಪನ ಇಲಾಖೆಯ ನಿಯಮಗಳಿಗನುಗುಣವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಅವರುಗಳನ್ನು ಒಂದು ಬಾರಿಗೆ ವಿಶೇಷ ನೇಮಕಾತಿ ಉಪಕ್ರಮದಲ್ಲಿ ಸೇವಾನುಭವದ ಆಧಾರದಲ್ಲಿ ಖಾಲಿಯಿರುವ ಭೂಮಾಪಕರ ಹುದ್ದೆಗೆ ಭರ್ತಿ ಮಾಡಲು ಕ್ರಮವಹಿಸುವುದರ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

08. **ಶ್ರೀ ಶರವಣ ಟಿ.ಎ** ಅವರು ಆಂಧ್ರಪ್ರದೇಶದ ತಿರುಮಲ ಬೆಟ್ಟದಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಭವನದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಯು ಅತ್ಯಂತ ಕಳಪೆ ಗುಣಮಟ್ಟದಿಂದ ಕೂಡಿರುವ ಕಾರಣ ಭಕ್ತಾದಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

09. **ಶ್ರೀ ರಮೇಶ್ ಬಾಬು** ಅವರು ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಪುರಸಭೆ ಮತ್ತು ಹುಳಿಯಾರು ಪಟ್ಟಣ ಪಂಚಾಯಿತಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿದ್ದರೂ ಕಾಮಗಾರಿಗಳನ್ನು ಪೂರ್ಣಗೊಳಿಸದೆ ಹಣ ದುರ್ಬಳಕೆಯಾಗಿರುವ ಬಗ್ಗೆ ಹಾಗೂ ಹುಳಿಯಾರು ಪಟ್ಟಣ ಪಂಚಾಯಿತಿಗೆ ಕಸ ವಿಲೇವಾರಿ ಮಾಡಲು ಸ್ಥಳ ನಿಗದಿಗೊಳಿಸದಿರುವ ಬಗ್ಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಶ್ರೀ ಪಿ.ಹೆಚ್. ಪೂಜಾರ್** ಅವರುಗಳು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ವಸತಿ ಹಾಗೂ ಜಮೀನುಗಳನ್ನು ಕಳೆದುಕೊಂಡ ರೈತರಿಗೆ ಪುನರ್ ವಸತಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಉಪ ಮುಖ್ಯಮಂತ್ರಿಗಳು)

೦2. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ರಾಮೋಜಿಗೌಡ** ಅವರುಗಳು ಸರ್ಕಾರಿ ಶಾಲೆ/ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು ಕಾಲಕಾಲಕ್ಕೆ ಸಿಗಬೇಕಾದ ಬಡ್ತಿಯಿಂದ ವಂಚಿತರಾಗಿರುವುದನ್ನೊಳಗೊಂಡಂತೆ ಇನ್ನಿತರೆ ಸೌಲಭ್ಯಗಳು ದೊರಕದೆ ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು)

೦3. **ಶ್ರೀ ಬಿ.ಜಿ. ಪಾಟೀಲ್** ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಾರಂಪರಿಕ ವೈದ್ಯ ಪದ್ಧತಿಯನ್ನು ಬಳಸಿ ಕಾಯಿಲೆಗಳನ್ನು ಗುಣಪಡಿಸುವವರ ಮಕ್ಕಳಿಗೆ ಬಿ.ಎ.ಎಂ.ಎಸ್ ವಿದ್ಯಾಭ್ಯಾಸದಲ್ಲಿ ಶೇ.2ರಷ್ಟು ಮೀಸಲಾತಿ ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

೦4. **ಡಾ: ತಳವಾರ್ ಸಾಬಣ್ಣ** ಅವರು ನ್ಯಾ. ಬಚಾವತ್ ಆಯೋಗದ ತೀರ್ಪಿನ ರೀತ್ಯಾ, ಕಲಬುರಗಿ, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಯ ಜನರು ಭೀಮಾ ನದಿಯ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಅನುವಾಗುವಂತೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಉಪ ಮುಖ್ಯಮಂತ್ರಿಗಳು)

೦5. **ಶ್ರೀಯುತರುಗಳಾದ ಪ್ರತಾಪ್ ಸಿಂಹ ನಾಯಕ್ ಕೆ., ಡಾ: ತಳವಾರ್ ಸಾಬಣ್ಣ, ಶಾಂತರಾಮ್ ಬುಡ್ನ ಸಿದ್ದಿ ಮತ್ತು ಡಾ: ಧನಂಜಯ ಸರ್ಜಿ** ಅವರುಗಳು ರಬ್ಬರ್ ಬೆಳೆಗಾರರು ತೀವ್ರ ಸಂಕಷ್ಟದಲ್ಲಿದ್ದು, ಸದರಿ ರೈತರುಗಳಿಗೆ ಅನುಕೂಲವಾಗುವ ರೀತ್ಯಾ ಸದರಿ ಕೃಷಿಯನ್ನು ವಾಣಿಜ್ಯ ಬೆಲೆಯೆಂದು ಪರಿಗಣಿಸುವುದರ ಬದಲಿಗೆ ಕೃಷಿ ಬೆಳೆಯೆಂದು ಪರಿಗಣಿಸುವುದು, ರಬ್ಬರ್ ಕೃಷಿಯನ್ನು ವಿಮಾ ಸೌಲಭ್ಯಕ್ಕೆ ಒಳಪಡಿಸುವುದು ಹಾಗೂ ರಬ್ಬರ್ ಆಮದಿನ ಸುಂಕವನ್ನು ಗರಿಷ್ಠ ಪ್ರಮಾಣಕ್ಕೆ ನಿಗದಿಪಡಿಸುವುದರ ಮೂಲಕ ರಬ್ಬರ್ ಬೆಳೆಗಾರರ ಸಂಕಷ್ಟವನ್ನು ನೀಗಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು)

೦6. **ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಎಸ್.ಎಲ್. ಭೋಜೇಗೌಡ, ಡಾ: ಯತೀಂದ್ರ ಎಸ್., ಶ್ರೀ ಡಿ.ಎಸ್. ಅರುಣ್, ಶ್ರೀ ಕೆ.ಎಸ್. ನವೀನ್, ಶ್ರೀ ಶಿವಕುಮಾರ್ ಕೆ. ಹಾಗೂ ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರುಗಳು ಕಾಡು ಪ್ರಾಣಿಗಳು ಹಾಗೂ ಮಾನವನ ಸಂಘರ್ಷದಲ್ಲಿ ಹಲವಾರು ಅಮಾಯಕ ಜೀವಗಳು ಬಲಿಯಾಗುತ್ತಿರುವ ಬಗ್ಗೆ ಹಾಗೂ ಮೃತರ ಕುಟುಂಬದವರಿಗೆ ಪರಿಹಾರ ಒದಗಿಸುವುದಲ್ಲದೆ ಪ್ರಾಣಿಗಳ ಅಸಹಜ ಸಾವು ಹಾಗೂ ಮೂಲಭೂತವಾಗಿ ಕಾಡು ಪ್ರಾಣಿಗಳು ನಾಡಿನೊಳಗೆ ಬಾರದಂತೆ ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು)

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>**ಮಾನ್ಯ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ. ಹಾಗೂ ಇತರರು** | ರಾಜ್ಯದಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಪಡಿಸುವುದು ಹಾಗೂ ನಾಶಗೊಂಡ ಬೆಳೆಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ವಿಷಯದ ಕುರಿತು |

## 06. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ಬಿ.ಪಿ.ಎಲ್ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಣೆ ಮತ್ತು ಮಾರಾಟ ಮಾಡಿರುವ ಪ್ರಕರಣಗಳ ಬಗ್ಗೆ ದಿನಾಂಕ:08.12.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:01(14)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಸಿ.ಟಿ. ರವಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಗರ್ಭಿಣಿ ಸ್ತ್ರೀಯರಿಗೆ ಹೆರಿಗೆಯ ಸಂದರ್ಭದಲ್ಲಿ ನೋವು ನಿವಾರಕ ಔಷಧಿ ನೀಡುವ ಬಗ್ಗೆ ದಿನಾಂಕ:08.12.2025ರ ಚುಕ್ಕೆ ರಹಿತ **ಪ್ರಶ್ನೆ ಸಂಖ್ಯೆ:95(03)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ರಮೇಶ್ ಬಾಬು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಇ. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳ ಬಗ್ಗೆ ದಿನಾಂಕ:11.12.2025ರ ಚುಕ್ಕೆ ರಹಿತ **ಪ್ರಶ್ನೆ ಸಂಖ್ಯೆ:47(585)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**